ಭಾನುವಾರ 25.01.2026
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 126
Digital Varthe Kannada Daily
Volume 01 - Issue 126
Sunday, 25.01.2026
Price: 5/- Rs
2 Pages Bangalore

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ
ಕನ್ನಡ ದಿನಪತ್ರಿಕೆ
DIGITAL VARTHE
digitalvarthe@gmail.com
www.digitalvarthe.com

## ಹಣದ ದುರಾಸೆಗೆ ಇಬ್ಬರ ಸಜೀವ ದಹನ :ಪ್ರಕರಣಕ್ಕೆ ಟ್ವಿಸ್ಟ್



**ಕಾರವಾರ:** ಉತ್ತರ ಕನ್ನಡ ಜಿಲ್ಲೆಯ ಹೊನ್ನಾವರ ತಾಲೂಕಿನ ಸೂಳೆ ಮುರ್ಕಿ ಕ್ರಾಸ್ ಬಳಿ ಸಂಭವಿಸಿದ್ದ ಭೀಕರ ಅಪಘಾತ ಪ್ರಕರಣಕ್ಕೆ ಇದೀಗ ಮಹತ್ವದ ತಿರುವು ಸಿಕ್ಕಿದೆ. ಸಿದ್ದಾಪುರ ಮೂಲದ ಮೀನಿನ ವ್ಯಾಪಾರಿಗಳಾದ ಮಂಜುನಾಥ್ ಹಾಗೂ ಚಂದ್ರಶೇಖರ್ ಅವರು ಕಾರಿನಲ್ಲಿ ಸಜೀವ ದಹನಗೊಂಡು ಮೃತಪಟ್ಟ ಘಟನೆ ಆರಂಭದಲ್ಲಿ ಆಕಸ್ಮಿಕ ರಸ್ತೆ ಅಪಘಾತ ಎಂದು ಭಾಸವಾಗಿತ್ತು. ಆದರೆ, ತನಿಖೆ ಮುಂದುವರಿದಂತೆ ಇದು ಹಣದ ಆಸೆಯಿಂದ ರೂಪಿಸಿದ ಪೂರ್ವನಿಯೋಜಿತ ಕೊಲೆ ಎಂಬುದು ಸ್ಪಷ್ಟವಾಗಿದೆ.

ಘಟನೆ ನಡೆದ ಬಳಿಕ ಮೃತರ ಕುಟುಂಬದವರು ಇದು ಸಾಮಾನ್ಯ ಅಪಘಾತವಲ್ಲ, ಉದ್ದೇಶಪೂರ್ವಕವಾಗಿ ನಡೆಸಿದ ಕೊಲೆ ಎಂದು ಶಂಕೆ ವ್ಯಕ್ತಪಡಿಸಿ ಹೊನ್ನಾವರ ಪೊಲೀಸ್ ಠಾಣೆಗೆ ದೂರು ದಾಖಲಿಸಿದ್ದರು. ಕುಟುಂಬದ ದೂರಿನ ಆಧಾರದಲ್ಲಿ ಪ್ರಕರಣವನ್ನು ಗಂಭೀರವಾಗಿ ತೆಗೆದುಕೊಂಡ ಪೊಲೀಸರು ಆಳವಾದ ತನಿಖೆಗೆ ಮುಂದಾದರು. ತನಿಖೆಯ ವೇಳೆ ಪ್ರಮೋದ್ ಎಂಬ ವ್ಯಕ್ತಿಯ ಮೇಲೆ ಅನುಮಾನ ಗಟ್ಟಿ ಆಗಿದ್ದು , ಪೊಲೀಸರು ವಿಚಾರಣೆಗಾಗಿ ಆತನನ್ನು ಹುಡುಕಿದಾಗ ಆತ ಪರಾರಿಯಾಗಿದ್ದನು.

ಸುಮಾರು 14 ದಿನಗಳ ಕಾಲ ಪೊಲೀಸರ ಕೈಗೆ ಸಿಗದೆ ತಲೆಮರೆಸಿಕೊಂಡಿದ್ದ ಪ್ರಮೋದ್ ಅನ್ನು ಹೊನ್ನಾವರ ಪೊಲೀಸರು ಕೊನೆಗೂ ಬಂಧಿಸುವಲ್ಲಿ ಯಶಸ್ವಿಯಾದರು. ವಿಚಾರಣೆ ವೇಳೆ ಆತ ಬೆಚ್ಚಿಬೀಳಿಸುವ ಸತ್ಯವನ್ನು ಬಾಯ್ಬಿಟ್ಟಿದ್ದಾನೆ. ಮೃತರಾದ ಮಂಜುನಾಥ್ ಹಾಗೂ ಚಂದ್ರಶೇಖರ್ ಇಬ್ಬರೂ ಪ್ರಮೋದ್ ಜೊತೆಗೆ ಮೀನಿನ ವ್ಯಾಪಾರದಲ್ಲಿ ಕೆಲಸ ಮಾಡುತ್ತಿದ್ದು , ವ್ಯವಹಾರ ಸಂಬಂಧವಾಗಿ ಸುಮಾರು 5 ಲಕ್ಷ ರೂಪಾಯಿ ಹಣವನ್ನು ಸಾಲವಾಗಿ ಪಡೆದಿದ್ದರು. ಇದಲ್ಲದೆ, ಪ್ರಮೋದ್ ತನ್ನ ಹೆಸರಿನಲ್ಲಿ ದೊಡ್ಡ ಮೊತ್ತದ (ಕೋಟಿ ರೂ.) ವಿಮೆ ಮಾಡಿಸಿಕೊಂಡಿದ್ದನು.

ಇನ್ಶುರೆನ್ಸ್ ಹಣ ಪಡೆಯುವ ದುರುದ್ದೇಶದಿಂದಲೇ ಪ್ರಮೋದ್ ಈ ಭೀಕರ ಕೃತ್ಯಕ್ಕೆ ಕೈ ಹಾಕಿರುವುದು ತನಿಖೆಯಿಂದ ಬೆಳಕಿಗೆ ಬಂದಿದೆ. ಆತ ತನ್ನ ಸ್ನೇಹಿತರ ಸಹಾಯದಿಂದ ಮಂಜುನಾಥ್ ಮತ್ತು ಚಂದ್ರಶೇಖರ್ ಅವರಿಗೆ ಆಹಾರ ಅಥವಾ ಪಾನೀಯದಲ್ಲಿ ಕೀಟನಾಶಕ ಮಿಶ್ರಣ ಮಾಡಿ ಕೊಲೆ ಮಾಡಿದ್ದಾನೆ. ಬಳಿಕ ಇಬ್ಬರ ಶವಗಳನ್ನು ಕಾರಿನಲ್ಲಿ ಹಾಕಿಕೊಂಡು ಸೂಳೆ ಮುರ್ಕಿ ಕ್ರಾಸ್ ಬಳಿ ಕಾರನ್ನು ತಳ್ಳಿ, ಮೇಲಿಂದ ಪೆಟ್ರೋಲ್ ಸುರಿದು ಬೆಂಕಿ ಹಚ್ಚಿ ಅಪಘಾತದ ರೂಪ ನೀಡಲು ಯತ್ನಿಸಿದ್ದಾನೆ ಎಂಬುದು ಪೊಲೀಸರ ತನಿಖೆಯಲ್ಲಿ ಬಹಿರಂಗವಾಗಿದೆ.

ಪ್ರಸ್ತುತ ಆರೋಪಿ ಪ್ರಮೋದ್ ಪೊಲೀಸರ ವಶದಲ್ಲಿದ್ದು , ಆತನನ್ನು ಇನ್ನಷ್ಟು ವಿಚಾರಣೆ ನಡೆಸಲಾಗುತ್ತಿದೆ. ಈ ಸಂಚಿನಲ್ಲಿ ಭಾಗಿಯಾಗಿರುವ ಇತರ ಆರೋಪಿಗಳಿಗಾಗಿ ಪೊಲೀಸರು ತೀವ್ರ ಶೋಧ ಕಾರ್ಯ ಮುಂದುವರೆಸಿದ್ದಾರೆ. ಆರಂಭದಲ್ಲಿ ಆಕಸ್ಮಿಕ ಅಪಘಾತ ಎಂದು ಕಂಡಿದ್ದ ಪ್ರಕರಣ ಇದೀಗ ಹಣದ ಲಾಲಸೆಯಿಂದ ನಡೆದ ಕ್ರೂರ ಕೊಲೆ ಎಂದು ಸಾಬೀತಾಗಿದ್ದು , ಇಡೀ ಉತ್ತರ ಕನ್ನಡ ಜಿಲ್ಲೆಯಲ್ಲಿ ತೀವ್ರ ಸಂಚಲನ ಮೂಡಿಸಿದೆ.

## ವ್ಯಕ್ತಿ ಆತ್ಮಹತ್ಯೆ : ಕಾರಣವಾಗಿದ್ದು ಒಂದು ವಿಡಿಯೋ!



**ಕಾರವಾರ:**ಸಾಮಾಜಿಕ,ವೈದ್ಯಕೀಯ ರಂಗದಲ್ಲಿ ಹೆಸರು ಮಾಡಿದ ಕುಟುಂಬಕ್ಕೆ ಸೇರಿದ ವ್ಯಕ್ತಿಯೋರ್ವ ಡಬಲ್ ಬ್ಯಾರಲ್ ಗನ್‌ನಿಂದ ಶೂಟ್ ಮಾಡಿಕೊಂಡು ತಮ್ಮ ನಿವಾಸದಲ್ಲಿಯೇ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಉತ್ತರ ಕನ್ನಡ ಜಿಲ್ಲೆಯ ಅಂಕೋಲಾ ತಾಲೂಕಿನ ಹಟ್ಟಿಕೇರಿಯಲ್ಲಿ ನಡೆದಿದೆ. ಪಿಕಳೆ ಕುಟುಂಬದ ಹಿರಿಯ ರಾಜೀವ್ ಪಿಕಳೆ ಮೃತ ದುರ್ದೈವಿಯಾಗಿದ್ದು , ಸೋಶಿಯಲ್ ಮೀಡಿಯಾದಲ್ಲಿನ ತೇಜೋವಧೆಯೇ ಅವರ ಆತ್ಮಹತ್ಯೆಗೆ ಕಾರಣ ಎನ್ನಲಾಗಿದೆ.

**ಕಾರವಾರದಲ್ಲಿ ಆಸ್ಪತ್ರೆಯನ್ನು ನಡೆಸುತ್ತಿರುವ ಪಿಕಳೆ ಕುಟುಂಬ:** ಎರಡು ತಲೆಮಾರಿನಿಂದ ವೈದ್ಯಕೀಯ ಕ್ಷೇತ್ರದಲ್ಲಿ ಸೇವೆ ನೀಡುತ್ತಿದೆ. ಈ ಆಸ್ಪತ್ರೆಯಲ್ಲಿ ರಾಜೀವ್ ಪಿಕಳೆ ಔಷಧ ವಿಭಾಗವನ್ನು ನೋಡಿಕೊಳ್ಳುತಿದ್ದರು. ಕೆಲವು ದಿನದ ಹಿಂದೆ ಅವರು ಅವಧಿ ಮುಗಿದ ಔಷಧ ನೀಡಿದ್ದಾರೆ ಎಂದು ಯೂಟ್ಯೂಬರ್ ಒಬ್ಬ ವಿಡಿಯೋ ಮಾಡಿ ಹರಿಬಿಟ್ಟಿದ್ದ. ಇದು ಸೋಶಿಯಲ್ ಮೀಡಿಯಾದಲ್ಲಿ ವೈರಲ್ ಆಗಿದ್ದು , ಎರಡು ತಲೆಮಾರಿನಿಂದ ವೈದ್ಯಕೀಯ ರಂಗದಲ್ಲಿ ಸೇವೆ ಸಲ್ಲಿಸುತಿದ್ದ ಪಿಕಳೆ ಕುಟುಂಬಕ್ಕೆ ಘಾಸಿ ಉಂಟುಮಾಡಿತ್ತು. ಇದರಿಂದ ಮನನೊಂದಿದ್ದ ರಾಜೀವ್ ಪಿಕಳೆ ಸಾಕಷ್ಟು ನೋವುಂಡಿದ್ದರು. ಇದಲ್ಲದೇ ಅವಧಿ ಮುಗಿದ ಔಷಧ ನೀಡಿದ್ದಕ್ಕೆ ಕ್ಷಮೆ ಯಾಚಿಸಿದ್ದರು. ಆದರೆ ವಿಡಿಯೋ ಹೆಚ್ಚು ವೈರಲ್ ಆಗಿದ್ದರಿಂದ ಮಾನಸಿಕವಾಗಿ ಅವರು ಕುಗ್ಗಿದ್ದರು. ಇದೇ ಕಾರಣಕ್ಕೆ ಮನೆಯಲ್ಲಿ ಡಬಲ್ ಬ್ಯಾರಲ್ ಗನ್ ನಿಂದ ಶೂಟ್ ಮಾಡಿಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ರಾಜಕೀಯ, ಸಾಮಾಜಿಕ, ವೈದ್ಯಕೀಯ ಕ್ಷೇತ್ರದಲ್ಲಿ ಎರಡು ತಲೆಮಾರಿನಿಂದ ಸೇವೆ ನೀಡುತ್ತಾ ಬಂದಿರುವ ಇವರದ್ದು ಕಾರವಾರದಲ್ಲಿ ಪ್ರತಿಷ್ಠಿತ ಕುಟುಂಬ. ಈ ಕುಟುಂಬದ ಸೇವೆ ಮೆಚ್ಚಿ ಕಾರವಾರದಲ್ಲಿ ರಸ್ತೆಯೊಂದಕ್ಕೆ ಪಿಕಳೆ ರಸ್ತೆ ಎಂದು ನಗರಸಭೆ ನಾಮಕರಣ ಮಾಡಿದೆ. ಇನ್ನು ರಾಜೀವ್ ಮಕ್ಕಳು ಸಹ ವೈದ್ಯರಾಗಿದ್ದು , ಇವರ ಕುಟುಂಬ ಬೆಂಗಳೂರಿನಲ್ಲಿ ನೆಲೆಸಿದೆ. ಆದರೆ ರಾಜೀವ್ ಮಾತ್ರ ಅಂಕೋಲಾದ ಹಟ್ಟಿಕೇರಿಯಲ್ಲಿ ಏಕಾಂಗಿಯಾಗಿ ವಾಸವಿದ್ದರು. ತನ್ನ ವಿಡಿಯೋ ವೈರಲ್ ಆಗಿರುವುದರಿಂದ ಮಾನಸಿಕವಾಗಿ ಕುಗ್ಗಿದ್ದ ಇವರು, ಈ ಬಗ್ಗೆ ಕುಟುಂಬದಲ್ಲಿ ಸಹ ಹೇಳಿಕೊಂಡಿದ್ದರು ಎನ್ನಲಾಗಿದೆ. ಇನ್ನು ಸ್ಥಳಕ್ಕೆ ಆಗಮಿಸಿದ ಪೊಲೀಸರು ಪರೀಕ್ಷೆ ನಡೆಸಿದಾಗ ಡೆತ್ ನೋಟ್ ಸಿಕ್ಕಿದ್ದು ಅದರಲ್ಲಿ ತನ್ನ ಸಾವಿಗೆ ತಾನೇ ಕಾರಣ ಎಂದು ಬರೆದಿರೋದು ಕಂಡುಬಂದಿದೆ.

## ನಾಯಿ ಹುಡುಕಲು ಹೋಗಿದ್ದ ಬಾಲಕ ರೈಲು ಡಿಕ್ಕಿಯಾಗಿ ಸಾವು



**ಬೆಂಗಳೂರು:** ಮನೆಯಲ್ಲಿ ಸಾಕಿದ್ದ ಪ್ರೀತಿಯ ಶ್ವಾನ ಎರಡು ದಿನಗಳಿಂದ ಕಾಣೆಯಾಗಿದ್ದ ಹಿನ್ನೆಲೆಯಲ್ಲಿ ಅದನ್ನು ಹುಡುಕಲು ಹೊರಟಿದ್ದ ಯುವಕನಿಗೆ ರೈಲು ಡಿಕ್ಕಿಯಾಗಿ ಸಾವನ್ನಪ್ಪಿರುವ ಹೃದಯವಿದ್ರಾವಕ ಘಟನೆ ಬೆಂಗಳೂರು ಹೊರವಲಯದ ನೆಲಮಂಗಲ ತಾಲೂಕಿನ ಮುದ್ದಲಿಂಗನಹಳ್ಳಿ ಗೇಟ್ ಬಳಿ ಸಂಭವಿಸಿದೆ.


ಮೃತ ಯುವಕನನ್ನು ಯೋಗೇಂದ್ರ ಎಂದು ಗುರುತಿಸಲಾಗಿದ್ದು , ಆತ ಶ್ರೀನಿವಾಸ್ ಹಾಗೂ ಚನ್ನಮ್ಮ ದಂಪತಿಯ ಪುತ್ರ. ಯೋಗೇಂದ್ರ ಪಿಯುಸಿ ವ್ಯಾಸಂಗ ಮಾಡುತ್ತಿದ್ದು , ಓದು ಹಾಗೂ ಕ್ರೀಡೆಯಲ್ಲಿ ಪ್ರತಿಭಾವಂತ ವಿದ್ಯಾರ್ಥಿಯಾಗಿ ಗುರುತಿಸಿಕೊಂಡಿದ್ದ. ಕುಟುಂಬದವರು ಸಾಕಿಕೊಂಡಿದ್ದ ಶ್ವಾನವು ಎರಡು ದಿನಗಳ ಹಿಂದೆ ಅಕಸ್ಮಾತ್ ಕಾಣೆಯಾಗಿದ್ದು , ಇದರಿಂದ ಯೋಗೇಂದ್ರ ತೀವ್ರ ಮನನೊಂದಿದ್ದ ಎನ್ನಲಾಗಿದೆ.

ಶ್ವಾನ ನಾಪತ್ತೆಯಾಗಿದ್ದರಿಂದ ಆತ ತುಂಬಾ ಬೇಸರಗೊಂಡು, ಬೆಳಗಿನ ಜಾವ ತಂದೆ-ತಾಯಿಗೆ ಯಾವುದೇ ಮಾಹಿತಿ ನೀಡದೇ ಶ್ವಾನವನ್ನು ಹುಡುಕಲು ಮನೆ ಹೊರಟಿದ್ದಾನೆ. ಈ ವೇಳೆ ಮುದ್ದಲಿಂಗನಹಳ್ಳಿ ರೈಲ್ವೆ ಗೇಟ್ ಬಳಿ ಹಳಿ ದಾಟುವ ಸಂದರ್ಭದಲ್ಲಿ ಅಪ್ರತೀಕ್ಷಿತವಾಗಿ ಬಂದ ರೈಲು ಯೋಗೇಂದ್ರಗೆ ಡಿಕ್ಕಿ ಹೊಡೆದಿದೆ. ಡಿಕ್ಕಿಯ ಪರಿಣಾಮ ಯೋಗೇಂದ್ರ ಸ್ಥಳದಲ್ಲೇ ಸಾವನ್ನಪ್ಪಿದ್ದಾನೆ ಎಂದು ತಿಳಿದುಬಂದಿದೆ.

ಯೋಗೇಂದ್ರ ಕೇವಲ ವಿದ್ಯಾರ್ಥಿ ಮಾತ್ರವಲ್ಲದೆ, ಕ್ರೀಡಾ ಕ್ಷೇತ್ರದಲ್ಲೂ ಮಿಂಚಿದ ಪ್ರತಿಭೆಯಾಗಿದ್ದ. ವಿಶೇಷವಾಗಿ ಲಾಂಗ್ ಜಂಪ್‌ನಲ್ಲಿ ಸಾಧನೆ ಮಾಡಿದ್ದ ಆತ ಶಾಲಾ ಹಂತದಲ್ಲಿ ಹಲವಾರು ಪ್ರಶಸ್ತಿಗಳನ್ನು ತನ್ನದಾಗಿಸಿಕೊಂಡಿದ್ದ. ಉತ್ತಮ ವಿದ್ಯಾಭ್ಯಾಸ, ಶಿಸ್ತಿನ ಜೀವನ ಮತ್ತು ಮೃದು ಸ್ವಭಾವದಿಂದ ಶಿಕ್ಷಕರು, ಸಹಪಾಠಿಗಳು ಹಾಗೂ ಸ್ಥಳೀಯರ ಮೆಚ್ಚುಗೆಗೆ ಪಾತ್ರನಾಗಿದ್ದನು.

ಘಟನೆಯ ಮಾಹಿತಿ ತಿಳಿದ ಕೂಡಲೇ ಯಶವಂತಪುರ ರೈಲ್ವೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಬಳಿಕ ಯೋಗೇಂದ್ರ ಮೃತದೇಹವನ್ನು ನೆಲಮಂಗಲ ಸಾರ್ವಜನಿಕ ಆಸ್ಪತ್ರೆಗೆ ಕರೆದೊಯ್ದು ಮರಣೋತ್ತರ ಪರೀಕ್ಷೆ ನಡೆಸಲಾಗಿದೆ. ಅಗತ್ಯ ಪ್ರಕ್ರಿಯೆಗಳ ನಂತರ ಮೃತದೇಹವನ್ನು ಕುಟುಂಬದವರಿಗೆ ಹಸ್ತಾಂತರಿಸಲಾಗಿದೆ.

ಶವಗಾರದ ಬಳಿ ಪುತ್ರನ ಮೃತದೇಹವನ್ನು ಕಂಡ ಪೋಷಕರ ಆಕ್ರಂದನ ಮುಗಿಲು ಮುಟ್ಟಿದ್ದು , ದೃಶ್ಯ ಕಂಡವರ ಮನಕಲಕುವಂತಿತ್ತು. ಕುಟುಂಬದ ಮೇಲೆ ದುಃಖದ ಪರ್ವತವೇ ಕುಸಿದಂತಾಗಿದೆ. ಈ ಸಂಬಂಧ ಯಶವಂತಪುರ ರೈಲ್ವೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿಕೊಂಡು ಮುಂದಿನ ತನಿಖೆ ಕೈಗೊಳ್ಳಲಾಗಿದೆ.



## ಶೋಭಾ ಯಾತ್ರೆ ಮತ್ತು ಹಿಂದೂ ಸಮಾಜೋತ್ಸವ



**ಪೀಣ್ಯ::** ಬೆಂಗಳೂರು ನಗರದ 48 ದಾಸರಹಳ್ಳಿ ಭಾಗದ 9 ನಗರಗಳಲ್ಲಿ ಹಿಂದೂ ಸಮಾಜೋತ್ಸವಗಳು ನಿಶ್ಚಯ ಆಗಿದೆ. ರಾಷ್ಟ್ರೀಯ ಸ್ವಯಂಸೇವಕ ಸಂಘದ 100ನೇ ವರ್ಷದ ಆಚರಣೆಯ ಹಿನ್ನಲೆಯಲ್ಲಿ ಇದು ನಡೆಯುತ್ತಿದೆ'ಎಂದು ಸಮಾಜೋತ್ಸವ ಸಮಿತಿಯ ಪ್ರಮುಖರಾದ ಗಂಗಾಧರ ಅವರು ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ನಗರದ ಪ್ರತಿ ವಾರ್ಡ್‌ಗಳಲ್ಲಿ ನಡೆಸಲು ನಿರ್ಣಹಿಸಲಾಗಿದೆ. ದಾಸರಹಳ್ಳಿ, ನಾಗಸಂದ್ರ, ಹೆಗ್ಗನಹಳ್ಳಿ, ಅಬ್ಬಿಗೆರೆ, ಅಂಜನಾನಗರ, ದಾಸನಪುರ, ತಾವರೆಕೆರೆ, ಹೆಸರಘಟ್ಟ , ಲಗ್ಗೆರೆ ಈ ನಗರಗಳ 48 ಹಿಂದೂಸಮಾಜೋತ್ಸವ ಆಯೋಜನೆ ಆಗಿದೆ. ಹಿಂದೂ ಸಮಾಜದ ಏಕತೆ, ಹಿಂದೂ ಸಂಸ್ಕೃತಿಯ ರಕ್ಷಣೆ, ರಾಷ್ಟ್ರೀಯ ಭಾವದ ಜಾಗೃತಿಗಾಗಿ ಈ ಸಮ್ಮೇಳನ ನಡೆಯುತ್ತಿದೆ' ಎಂದು ತಿಳಿಸಿದರು.

ವೇದಿಕೆಗೆ ಹೋಗುವ ಮುನ್ನ ಭಾರತಾಂಬೆಯ ಭಾವಚಿತ್ರದ ಶೋಭಾ ಯಾತ್ರೆ ನಡೆಯುತ್ತದೆ. ನೂರಾರು ಮಹಿಳೆಯರಿಂದ ಪೂರ್ಣ ಕುಂಭ ಕಳಸ, ಭಜನೆ ಭಕ್ತಿ ಗೀತೆಗಳು, ಮಕ್ಕಳಿಂದ ಮಹಾಪುರುಷರ ವೇಷಭೂಷಣ ಮತ್ತು ಜಾನಪದದ ಕಲಾ ವಾದ್ಯಮೇಳಗಳೊಂದಿಗೆ ಶೋಭಾ ಯಾತ್ರೆ ನಡೆಯಲಿದೆ. ವೇದಿಕೆಯ ಕಾರ್ಯಕ್ರಮ ನಡೆಯಲಿದ್ದು , ಸಾಂಸ್ಕೃತಿಕ ಕಾರ್ಯಕ್ರಮದ ಜೊತೆಗೆ ಅನೇಕ ಸ್ವಾಮೀಜಿಗಳು ಭಾಗವಹಿಸಿ ಪ್ರವಚನ ನೀಡಲಿದ್ದಾರೆ' ಎಂದರು.

ಈ ಸಮಾಜೋತ್ಸವದ ಮೂಲಕ ಪಂಚಪರಿವರ್ತನೆಯ ಕಲ್ಪನೆ ಇಟ್ಟುಕೊಂಡು ಸಮಾಜದಲ್ಲಿ ವ್ಯಾಪಕ ಪರಿವರ್ತನೆ ಆಗಬೇಕೆಂಬುದೇ ಸಂಘಟನೆಯ ಉದ್ದೇಶ. ಕಟುಂಬ ಪ್ರಬೋಧನ- ಕೌಟುಂಬಿಕ ಮೌಲ್ಯ ಸಂರಕ್ಷಣೆ, ಸಾಮರಸ್ಯ- ಸಮಾಜದಲ್ಲಿ ಸಹಬಾಳ್ವೆಯ ಜಾಗೃತಿ ಮೂಡಿಸುವ ಕೆಲಸ, ಪರ್ಯಾವರಣ- ಪರಿಸರ ಸಂರಕ್ಷಣೆ ಜಾಗೃತಿ, ಸ್ವದೇಶಿ ಭಾವದ ಜಾಗೃತಿ ಮತ್ತು ನಾಗರೀಕ ಶಿಷ್ಟಾಚಾರ ಇವು ಐದು ವಿಷಯಗಳಲ್ಲಿ ಹಿಂದೂ ಸಮಾಜ ಜಗತ್ತಿಗೆ ಮಾದರಿಯಾಗಬೇಕು. ತನ್ಮೂಲಕ ವಿಶ್ವಕಲ್ಯಾಣ ಆಗಬೇಕು ಭಾರತ ಅದಕ್ಕೆ ನೇತೃತ್ವ ವಹಿಸಿಕೊಳ್ಳಬೇಕಾಗಿದೆ ಎಂದು ಸಮಾಜೋತ್ಸವ ಸಮಿತಿಯ ಪ್ರಾಂತ ಅಧಿಕಾರಿ ಬಾಲಕೃಷ್ಣ ಕಿಣಿ ತಿಳಿಸಿದರು.

ಪತ್ರಿಕಾ ಗೋಷ್ಠಿಯಲ್ಲಿ ದಾಸರಹಳ್ಳಿ ಸಮಾಜೋತ್ಸವ ಸಮಿತಿಯ ಅಧ್ಯಕ್ಷ ಮತ್ತು ಕೈಗಾರಿಕೋದ್ಯಮಿ ಆದ ಸುಧೀರ್ ಮತ್ತು ನಾಗಸಂದ್ರ ಸಮಾಜೋತ್ಸವ ಸಮಿತಿಯ ಅಧ್ಯಕ್ಷ ಮತ್ತು ಕೈಗಾರಿಕೋದ್ಯಮಿ ಆದ ಶಿವರಾಜ್,ಸಂಯೋಜಕರಾದ ಅನಂತು,ಸೌಂದರ್ಯ ಭರತ್, ಸತ್ಯವೇಲು ಮತ್ತು ಕೃಷ್ಣಮೂರ್ತಿ ಸಮ್ಮುಖದಲ್ಲಿ ಪತ್ರಿಕಾ ಗೋಷ್ಠಿ ನಡೆಯಿತು.

## ಸರ್ಕಾರಿ ಸೇವೆಗಳಿಗೆ ಅಕ್ರಮ ಇ-ಸ್ಟ್ಯಾಂಪ್ ಬಳಕೆ




**ನೆಲಮಂಗಲ:** ರಾಜ್ಯದಲ್ಲಿ ಮತ್ತೆ ಇ-ಸ್ಟ್ಯಾಂಪ್ ಪೇಪರ್ ಹಗರಣ ತಲೆ ಎತ್ತಿದ್ದು , ಸರ್ಕಾರದ ಯೋಜನೆಗಳು ಹಾಗೂ ವಿವಿಧ ಸೇವೆಗಳನ್ನು ಪಡೆಯಲು ಅಕ್ರಮ ಇ-ಸ್ಟ್ಯಾಂಪ್ ಪೇಪರ್ ಬಳಕೆ ಮಾಡಲಾಗುತ್ತಿದೆ ಎಂಬ ಗಂಭೀರ ಆರೋಪಗಳು ಕೇಳಿಬಂದಿವೆ. ವಿಶೇಷವಾಗಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನೆಲಮಂಗಲ ತಾಲ್ಲೂಕಿನಲ್ಲಿ ಈ ಅಕ್ರಮ ನಡೆಯುತ್ತಿರುವುದು ಬೆಳಕಿಗೆ ಬಂದಿದ್ದು , ಸಾರ್ವಜನಿಕ ವಲಯದಲ್ಲಿ ತೀವ್ರ ಚರ್ಚೆಗೆ ಕಾರಣವಾಗಿದೆ.

ನೆಲಮಂಗಲ ತಾಲ್ಲೂಕಿನ ಕಳಲುಘಟ್ಟ ವಿವಿದೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರ ಸಂಘದ ವ್ಯಾಪ್ತಿಗೆ ಒಳಪಡುವ ಹಸಿರುವಳ್ಳಿ ಶಾಖೆಯಲ್ಲಿ ಅಕ್ರಮ ಇ-ಸ್ಟ್ಯಾಂಪ್ ಪೇಪರ್ ಬಳಸಿರುವ ಪ್ರಕರಣಗಳು ಪತ್ತೆಯಾಗಿವೆ. ಸರ್ಕಾರಿ ಅನುಮತಿ ಅಗತ್ಯವಿರುವ ಪ್ರಕ್ರಿಯೆಗಳಲ್ಲಿ ನಕಲಿ ಹಾಗೂ ಅಕ್ರಮ ಇ-ಸ್ಟ್ಯಾಂಪ್ ಪೇಪರ್‌ಗಳನ್ನು ಬಳಸಿಕೊಂಡು ದಾಖಲೆಗಳನ್ನು ಸಿದ್ಧಪಡಿಸಿರುವುದಾಗಿ ಆರೋಪಿಸಲಾಗಿದೆ.

ಮುಖ್ಯವಾಗಿ ಆಹಾರ ಇಲಾಖೆಯ ವ್ಯಾಪ್ತಿಯಲ್ಲಿ ಪಡಿತರ ಅಂಗಡಿ (ರೇಷನ್ ಶಾಪ್) ಪರವಾನಗಿ ಪಡೆಯಲು ಈ ಅಕ್ರಮ ಇ-ಸ್ಟ್ಯಾಂಪ್ ಪೇಪರ್‌ಗಳ ದುರ್ಬಳಕೆ ಮಾಡಲಾಗಿದೆ ಎನ್ನಲಾಗಿದೆ. ನಕಲಿ ಇ-ಸ್ಟ್ಯಾಂಪ್ ಪೇಪರ್‌ಗಳನ್ನು ಸಲ್ಲಿಸಿ, ಅಕ್ರಮ ಮಾರ್ಗದ ಮೂಲಕ ಪಡಿತರ ಅಂಗಡಿಗಳನ್ನು ಪಡೆದುಕೊಂಡಿರುವವರಿರುವುದಾಗಿ ದೂರುದಲ್ಲಿ ಉಲ್ಲೇಖಿಸಲಾಗಿದೆ. ಇದರಿಂದ ಅರ್ಹರಿಗೆ ಸಿಗಬೇಕಾದ ಅವಕಾಶಗಳು ಅನರ್ಹರ ಕೈ ಸೇರಿರುವ ಸಾಧ್ಯತೆ ವ್ಯಕ್ತವಾಗಿದೆ.

ಈ ಗಂಭೀರ ಅಕ್ರಮದ ಕುರಿತು ಜಿ. ಆನಂದ್ ಅವರು ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿ (ಎಡಿಸಿ) ಅವರಿಗೆ ಅಧಿಕೃತ ದೂರು ಸಲ್ಲಿಸಿದ್ದಾರೆ. ದೂರಿನಲ್ಲಿ, ಇ-ಸ್ಟ್ಯಾಂಪ್ ಪೇಪರ್ ಅಕ್ರಮವಾಗಿ ಬಳಕೆಯಾಗಿರುವುದು ಸ್ಪಷ್ಟವಾಗಿದ್ದರೂ ಸಹ ಸಂಬಂಧಪಟ್ಟ ಅಧಿಕಾರಿಗಳು ಇದುವರೆಗೆ ಯಾವುದೇ ಕಠಿಣ ಕ್ರಮ ಕೈಗೊಳ್ಳದೇ ಮೀನಾಮೇಷ ಎಣಿಸುತ್ತಿದ್ದಾರೆ ಎಂಬ ಆರೋಪವೂ ಮಾಡಲಾಗಿದೆ.

ಅಕ್ರಮ ನಡೆದಿರುವುದು ಖಚಿತವಾಗಿ ರುವಾಗಲೂ ಕ್ರಮ ಕೈಗೊಳ್ಳದಿರುವುದು ಆಡಳಿತಾತ್ಮಕ ವೈಫಲ್ಯಕ್ಕೆ ಸೂಚನೆಯಾಗಿದೆ ಎಂದು ಸಾರ್ವಜನಿಕ ವಲಯದಲ್ಲಿ ಆಕ್ರೋಶ ವ್ಯಕ್ತವಾಗಿದೆ. ಈ ಪ್ರಕರಣದಲ್ಲಿ ಭಾಗಿಯಾಗಿರುವ ಎಲ್ಲರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು, ಅಕ್ರಮವಾಗಿ ಪಡೆದ ಪಡಿತರ ಅಂಗಡಿ ಪರವಾನಗಿಗಳನ್ನು ರದ್ದುಪಡಿಸಬೇಕು ಹಾಗೂ ಹೊಣೆಗಾರ ಅಧಿಕಾರಿಗಳ ಮೇಲೂ ಶಿಸ್ತು ಕ್ರಮ ಜರುಗಿಸಬೇಕು ಎಂಬ ಆಗ್ರಹಗಳು ಕೇಳಿಬಂದಿವೆ.

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನೆಲಮಂಗಲ ತಾಲ್ಲೂಕಿನ ಹಸಿರುವಳ್ಳಿಯಲ್ಲಿ ನಡೆದಿರುವ ಈ ಘಟನೆ, ಇ-ಸ್ಟ್ಯಾಂಪ್ ವ್ಯವಸ್ಥೆಯ ದುರ್ಬಳಕೆಯನ್ನು ಮತ್ತೊಮ್ಮೆ ಬಯಲಿಗೆ ತಂದಿದ್ದು , ಸರ್ಕಾರದ ಯೋಜನೆಗಳ ಪಾರದರ್ಶಕತೆ ಮತ್ತು ನೈಜ ಅರ್ಹರಿಗೆ ಸೌಲಭ್ಯಗಳು ತಲುಪುವ ಬಗ್ಗೆ ಗಂಭೀರ ಪ್ರಶ್ನೆಗಳನ್ನು ಎತ್ತಿದೆ.

## ಮಾಧ್ಯಮ ಸ್ಟುಡಿಯೋ ಕಚೇರಿಯ ಸನ್ಮಿತ್ರರಿಂದ ಸನ್ಮಾನ



**ಕೃಷ್ಣರಾಜಪೇಟೆ:** ಪಟ್ಟಣದ ಹೃದಯ ಭಾಗದ ಬಿಜಿಎಸ್ ಕಾಂಪ್ಲೆಕ್ಸ್ ನಲ್ಲಿ ಇರುವ ಮಾಧ್ಯಮ ಸ್ಟುಡಿಯೋ ಕಚೇರಿಯಲ್ಲಿ ಕರ್ನಾಟಕ ಮಾಧ್ಯಮ ಅಕಾಡೆಮಿ ಪ್ರಶಸ್ತಿ ಪುರಸ್ಕೃತರಾದ ಹಿರಿಯ ಪತ್ರಕರ್ತ ಕೆ.ಆರ್. ನೀಲಕಂಠ ರವರಿಗೆ ಆತ್ಮೀಯವಾಗಿ ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದ ಪತ್ರಕರ್ತ ಜಿ.ಪಿ. ರಾಜು ರವರು 35 ವರ್ಷಗಳ ಕಾಲ ಸೇವೆ ಸಲ್ಲಿಸಿರುವ ಕೆ.ಆರ್. ನೀಲಕಂಠ ರವರು ಮಾಧ್ಯಮ ಅಕಾಡೆಮಿ ಪ್ರಶಸ್ತಿಗೆ ಭಾಜನರಾಗಿರುವುದು ನಮ್ಮ ತಾಲ್ಲೂಕಿಗೆ ಹೆಮ್ಮೆಯ ವಿಷಯ ಅವರ ಬದ್ಧತೆ ಇಂದಿನ ಯುವ ಪತ್ರಕರ್ತರಿಗೆ ಮಾದರಿಯಾಗಿದೆ ಎಂದು ಶುಭ ಹಾರೈಸಿದರು,

ಪತ್ರಕರ್ತ ಲೋಕೇಶ್. ವಿ. ಅವರು ಮಾತನಾಡಿ ಕೆ.ಆರ್ ನೀಲಕಂಠ ರವರಿಗೆ ಮುಂದಿನ ದಿನಗಳಲ್ಲಿ ಇನ್ನು ಹೆಚ್ಚಿನ ಗೌರವಗಳು ಅರಸಿ ಬರಲಿ ಎಂದು ಶುಭ ಹಾರೈಸಿದರು.

ನಂತರ ಯುವ ಪತ್ರಕರ್ತ ಸಾಯಿಕುಮಾರ್. ಎನ್. ಕೆ, ರವರು ಮಾತನಾಡಿ, ಸಮಾಜದ ಅಂಕುಡೊಂಕುಗಳನ್ನು ತಿದ್ದುವಲ್ಲಿ ಪತ್ರಕರ್ತರ ಪಾತ್ರ ದೊಡ್ಡದು. ಕೆ.ಆರ್. ನೀಲಕಂಠ ರವರ ಈ ಸಾಧನೆ ಅವರ ನಿರಂತರ ಶ್ರಮಕ್ಕೆ ಸಿಕ್ಕ ಪ್ರತಿಫಲ ಎಂದರು,

ಸನ್ಮಾನ ಸ್ವೀಕರಿಸಿ ಮಾತನಾಡಿದ ಕೆ.ಆರ್. ನೀಲಕಂಠ ರವರು ಸಮಾಜದ ಕಟ್ಟಕಡೆಯ ವ್ಯಕ್ತಿಯ ಧ್ವನಿಯಾಗುವುದು ಪತ್ರಿಕೋದ್ಯಮದ ಮುಖ್ಯ ಉದ್ದೇಶ ನನ್ನ 35 ವರ್ಷಗಳ ಸೇವೆಗೆ ಈ ದಿನ ಪ್ರತಿಫಲ ಸಿಕ್ಕಿದೆ ಈ ದಿನ ಮಾಧ್ಯಮ ಸ್ಟುಡಿಯೋ ಕಚೇರಿಯ ಪತ್ರಿಕಾ ಸನ್ಮಿತ್ರರಿಂದ ನೀಡಿದ ಈ ಗೌರವ ನನ್ನ ಜವಾಬ್ದಾರಿಯನ್ನು ಮತ್ತಷ್ಟು ಹೆಚ್ಚಿಸಿದೆ, ಎಂದು ಕೃತಜ್ಞತೆ ಸಲ್ಲಿಸಿದರು.

## ಕಪಾಳಮೋಕ್ಷ ಮಾಡಿದಕ್ಕೆ ನಾನೇ ನನ್ನ ಸ್ನೇಹಿತನನ್ನು ಕೊಂದೆ





**ದೆಹಲಿ:**ಈಶಾನ್ಯ ದೆಹಲಿಯ ಮೌಜ್ ಪುರದ ಕೆಫೆಯೊಂದರಲ್ಲಿ 24 ವರ್ಷದ ಯುವಕನನ್ನು ಗುಂಡಿಕ್ಕಿ ಕೊಂದ ಘಟನೆಯೊಂದು ನಡೆದಿದೆ. ಇದೀಗ ಈ ಕೊಲೆಯ ಬಗ್ಗೆ ಆರೋಪಿ ತಪ್ಪೊಪ್ಪಿಗೆಯ ವಿಡಿಯೋವೊಂದನ್ನು ಹಂಚಿಕೊಂಡಿದ್ದಾನೆ. ಗುಂಡಿಕ್ಕಿ ಕೊಂದ ನಂತರ ಮನಕಲಕುವ ತಪ್ಪೊಪ್ಪಿಗೆ ಹೇಳಿಕೆಯನ್ನು ನೀಡಿದ್ದಾನೆ. ಗುರುವಾರ (ಜ22) ರಾತ್ರಿ ವೈಯಕ್ತಿಕ ದ್ವೇಷಕ್ಕಾಗಿ 24 ವರ್ಷದ ಫೈಜಾನ್ ಎಂಬ ಯುವಕನನ್ನು ಕೊಲೆ ಮಾಡಿದ್ದಾಗಿ ಆರೋಪಿ ಒಪ್ಪಿಕೊಂಡಿದ್ದಾನೆ. @moin-qureshiii_' ಇನ್‌ಸ್ಟಾಗ್ರಾಮ್ ಖಾತೆಯಲ್ಲಿ ಈ ಬಗ್ಗೆ ಹಂಚಿಕೊಂಡಿದ್ದು , ಈ ಹೇಳಿಕೆ ಭಾರೀ ಚರ್ಚೆಗೆ ಕಾರಣವಾಗಿದೆ. ಕೆಲವು ತಿಂಗಳ ಹಿಂದೆ ಫೈಜಾನ್ ನನಗೆ ಹೊಡೆದ ಎಂಬ ಕಾರಣಕ್ಕೆ ನಾನು ಅವನನ್ನು ಕೊಲೆ ಮಾಡಿದೆ ಎಂದು ಹೇಳಿದ್ದಾನೆ. ಈ ಕೊಲೆಯಲ್ಲಿ ನನ್ನ ಕುಟುಂಬ ಅಥವಾ ಸ್ನೇಹಿತರ ಯಾವುದೇ ಪಾತ್ರ ಇಲ್ಲ ಎಂದು ಹೇಳಿದ್ದಾನೆ.

ನಾನು ಫೈಜಾನ್‌ನನ್ನು ವೈಯಕ್ತಿಕ ದ್ವೇಷದಿಂದ ಕೊಂದೆ. ಇದರಲ್ಲಿ ನನ್ನ ತಂದೆಯ ಯಾವುದೇ ಪಾತ್ರವಿಲ್ಲ, ನನ್ನ ಕುಟುಂಬ ಅಥವಾ ಸ್ನೇಹಿತರಿಗೆ ಯಾವುದೇ ಸಂಬಂಧವಿಲ್ಲ. ನನ್ನ ಮನೆಯವರ ಮಾತು ಕೇಳಿ ಆತನನ್ನು ಕೊಂದಿಲ್ಲ. ಹಾಗೂ ಈ ಕೊಲೆಯನ್ನು ಹಣಕ್ಕಾಗಿ ಮಾಡಿಲ್ಲ. ನಾಲ್ಕು ತಿಂಗಳ ಹಿಂದೆ ನನಗೆ ಕಪಾಳಮೋಕ್ಷ ಮಾಡಿದ್ದ, ಆ ಕಾರಣಕ್ಕೆ ಕೋಪಗೊಂಡು ನಾನು ಕೊಲೆ ಮಾಡಿದ್ದಾನೆ. ಈ ವಿಷಯವು ಹಣಕ್ಕೆ ಸಂಬಂಧಿಸಿದೆ ಎಂಬ ಫೈಜಾನ್ ಅವರ ಸಹೋದರನ ಹೇಳಿಕೆಯನ್ನು ಸುಳ್ಳು ಎಂದು ಹೇಳಿದ್ದಾನೆ.

ಫೈಜಾನ್ ಅಣ್ಣ ಹೇಳಿರುವ ಪ್ರಕಾರ, ನನ್ನ ತಮ್ಮನ್ನು ಹಣಕ್ಕಾಗಿ ಕೊಲೆ ಮಾಡಿದ್ದಾರೆ. ಇದರಲ್ಲಿ ಕೊಲೆಗಾರನ ತಂದೆ, ಸ್ನೇಹಿತರ ಕೈವಾಡ ಇದೆ ಎಂದು ಹೇಳಿದ್ದಾರೆ. ಹಣಕ್ಕಾಗಿ ತನ್ನ ತಮ್ಮ ಜತೆಗೆ ಕೊಲೆಗಾರನ ತಂದೆ ಜಗಳ ಮಾಡಿದ್ದಾರೆ. ಈ ಜಗಳ ನಂತರವೇ ತಮ್ಮನ ಕೊಲೆಯಾಗಿದೆ. ಕೊಲೆಗಾರ ಹಾಗೂ ಆತನ ತಂದೆ ಈಗಲೇ ಬಂಧಿಸಬೇಕು ಎಂದು ಫೈಜಾನ್ ಸಹೋದರ ಸಲ್ಮಾನ್ ಹೇಳಿದ್ದಾರೆ. ಫೈಜಾನ್ ಸಾಲ ಪಡೆದಿದ್ದ, ಮರುಪಾವತಿಸಲು ಸಾಧ್ಯವಾಗದಿದ್ದಾಗ, ತಂದೆ ಮತ್ತು ಮಗ ನಮ್ಮ ಮನೆಗೆ ಬಂದು ಜಗಳವಾಡಿದ್ದಾರೆ. ಈ ಬಗ್ಗೆ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದೇವೆ. ಮೌಜ್‌ಪುರದ ಮಿಸ್ಟರ್ ಕಿಂಗ್ ಲೌಂಜ್ ಮತ್ತು ಕೆಫೆಯಲ್ಲಿ ವೆಲ್ಕಮ್ ಪ್ರದೇಶದ ನಿವಾಸಿ ಫೈಜಾನ್ ಅವರನ್ನು ಗುಂಡಿಕ್ಕಿ ದಾಳಿ ನಡೆಸಲಾಗಿತ್ತು.

ಗಂಭೀರವಾಗಿ ಗಾಯಗೊಂಡಿದ್ದ ಫೈಜಾನ್ ಅನ್ನು ಗುರು ತೇಗ್ ಬಹದ್ದೂರ್ (ಜಿಟಿಬಿ) ಆಸ್ಪತ್ರೆಗೆ ಸಾಗಿಸಲಾಯಿತು, ಆದರೆ ಆಸ್ಪತ್ರೆಗೆ ಕರೆದೊಯ್ಯುವಾಗಲೇ ದಾರಿ ಮಧ್ಯೆ ಮೃತಪಟ್ಟಿದ್ದಾರೆ. ಮೂರು ಗುಂಡುಗಳು ತನ್ನ ಸಹೋದರನಿಗೆ ತಗುಲಿದೆ. ಒಂದು ಅವನ ತಲೆಗೆ ಹಾಗೂ ಎರಡು ಎದೆಗೆ ಹೊಕ್ಕವು, ಅವನ ಕೈಯಲ್ಲಿ ಗಾಯದ ಗುರುತು ಕೂಡ ಇದೆ ಸಲ್ಮಾನ್ ಹೇಳಿದ್ದಾರೆ. ಭಾರತೀಯ ನ್ಯಾಯ ಸಂಹಿತಾ ಮತ್ತು ಶಸ್ತ್ರಾಸ್ತ್ರ ಕಾಯ್ದೆಯ ಸಂಬಂಧಿತ ವಿಭಾಗಗಳ ಅಡಿಯಲ್ಲಿ ಪ್ರಕರಣ ದಾಖಲಿಸಲಾಗಿದ್ದು , ಆರೋಪಿಗಳನ್ನು ಬಂಧಿಸಲು ಹಲವಾರು ಪೊಲೀಸ್ ತಂಡಗಳನ್ನು ರಚಿಸಲಾಗಿದೆ.

## ಚಲಿಸುತ್ತಿದ್ದ ಬಸ್‌ಗೆ ತಲೆಕೊಟ್ಟು ಯುವಕ ಆತ್ಮಹತ್ಯೆ

**ತುಮಕೂರು:** ಚಲಿಸುತ್ತಿದ್ದ ಕೆಎಸ್‌ಆರ್‌ಟಿಸಿ ಬಸ್‌ಗೆ ತಲೆಕೊಟ್ಟು ಯುವಕ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಕುಣಿಗಲ್ ಪಟ್ಟಣದ ಅಗ್ರಹಾರದ ಬಳಿ ನಡೆದಿದೆ.

ಕುಣಿಗಲ್ ಪಟ್ಟಣದ ನಿವಾಸಿ ತಿಮ್ಮೇಗೌಡ ಮೃತ ಯುವಕ. ಪೊಲೀಸರ ಪ್ರಾಥಮಿಕ ತನಿಖೆಯಲ್ಲಿ ಕೌಟುಂಬಿಕ ಕಲಹಕ್ಕೆ ಬೇಸತ್ತು ಬಸ್‌ಗೆ ಸಿಲುಕಿ ಆತ್ಮಹತ್ಯೆ ಮಾಡಿಕೊಂಡಿರುವ ಶಂಕೆ ವ್ಯಕ್ತವಾಗಿದೆ ಶುಕ್ರವಾರ ರಾತ್ರಿ 12:40ರ ಸುಮಾರಿಗೆ ಘಟನೆ ನಡೆದಿದೆ. ಬಸ್ ಚಲಿಸುತ್ತಿದ್ದ ವೇಳೆ ಯುವ ಏಕಾಏಕಿ ನುಗ್ಗಿದ ಪರಿಣಾಮ ಬಸ್ ಯುವಕನ ತಲೆ ಮೇಲೆ ಹರಿದು ಸ್ಥಳದಲ್ಲೇ ಆತ ಮೃತಪಟ್ಟಿದ್ದಾನೆ. ಬಸ್ಸಿನಡಿಗೆ ಯುವಕ ನುಗ್ಗುವ ದೃಶ್ಯ ಸಿಸಿಟಿವಿ ಕ್ಯಾಮೆರಾದಲ್ಲಿ ಸೆರೆಯಾಗಿದೆ. ಘಟನಾ ಸ್ಥಳಕ್ಕೆ ಕುಣಿಗಲ್ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203,
Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

# ಬೆಂಗಳೂರಲ್ಲಿ ಹಿಟ್ & ರನ್‌ಗೆ ಡೆಲಿವರಿ ಬಾಯ್ ಬಲಿ



**ಬೆಂಗಳೂರು:** ಹಿಟ್ ಅಂಡ್ ರನ್ ಪ್ರಕರಣಕ್ಕೆ ಡೆಲಿವರಿ ಬಾಯ್ ಬಲಿಯಾಗಿರುವ ದುರ್ಘಟನೆ ಬೆಂಗಳೂರು ನಗರದ ಕೆಆರ್ ಪುರಂ ಸಂಚಾರಿ ವ್ಯಾಪ್ತಿಯ ಭಟ್ಟರಹಳ್ಳಿ ಸಿಗ್ನಲ್ ಬಳಿ ಸಂಭವಿಸಿದೆ. ತಡರಾತ್ರಿ ನಡೆದ ಈ ಅಪಘಾತದಲ್ಲಿ ಡೆಲಿವರಿ ಕೆಲಸ ಮಾಡುತ್ತಿದ್ದ ಯುವಕನೊಬ್ಬ ತನ್ನ ಪ್ರಾಣವನ್ನು ಕಳೆದುಕೊಂಡಿದ್ದಾನೆ.

ಮೃತನನ್ನು ನೇಪಾಳ ಮೂಲದ ಸುರೇಂದರ್ ಬಹದ್ದೂರ್ (38) ಎಂದು ಗುರುತಿಸಲಾಗಿದೆ. ಇಂದು ಬೆಳಗಿನ ಜಾವ ಸುಮಾರು 3.30ರ ವೇಳೆಗೆ ಈ ಭೀಕರ ಅಪಘಾತ ಸಂಭವಿಸಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಸುಮಾರು ಮೂರು ವರ್ಷಗಳ ಹಿಂದೆ ಉದ್ಯೋಗ ಅರಸಿ ಬೆಂಗಳೂರಿಗೆ ಬಂದಿದ್ದ ಸುರೇಂದರ್, ಇಲ್ಲಿನ ಖಾಸಗಿ ಕಂಪನಿಯಲ್ಲಿ ಡೆಲಿವರಿ ಬಾಯ್ ಆಗಿ ಕೆಲಸ ಮಾಡಿಕೊಂಡು ಜೀವನ ನಡೆಸುತ್ತಿದ್ದ.


ಸಾಮಾನ್ಯ ದಿನದಂತೆ ಡೆಲಿವರಿ ನೀಡುವ ಉದ್ದೇಶದಿಂದ ಸ್ಕೂಟಿಯಲ್ಲಿ ತೆರಳುತ್ತಿದ್ದ ವೇಳೆ, ಭಟ್ಟರಹಳ್ಳಿ ಸಿಗ್ನಲ್ ಬಳಿ ವೇಗವಾಗಿ ಬಂದ ಕಾರೊಂದು ಸುರೇಂದರ್ ಚಾಲನೆ ಮಾಡುತ್ತಿದ್ದ ಸ್ಕೂಟಿಗೆ ಡಿಕ್ಕಿ ಹೊಡೆದಿದೆ. ಡಿಕ್ಕಿಯ ಹೊಡೆತ ತೀವ್ರವಾಗಿದ್ದರಿಂದ ಸುರೇಂದರ್ ರಸ್ತೆ ಮೇಲೆ ಬಿದ್ದಿದ್ದು, ಗಂಭೀರ ಗಾಯಗಳನ್ನು ಹೊಂದಿದ್ದಾನೆ. ಅಪಘಾತದ ನಂತರ ಕಾರು ಚಾಲಕ ಯಾವುದೇ ನೆರವು ನೀಡದೇ ಸ್ಥಳದಿಂದ ಪರಾರಿಯಾಗಿರುವುದು ಸ್ಥಳೀಯರ ಆಕ್ರೋಶಕ್ಕೆ ಕಾರಣವಾಗಿದೆ.

ಅಪಘಾತದ ಪರಿಣಾಮ ಸುರೇಂದರ್ ಸ್ಥಳದಲ್ಲೇ ಮೃತಪಟ್ಟಿದ್ದಾನೆ ಎಂದು ತಿಳಿದುಬಂದಿದೆ. ಈ ಹಿಟ್ ಅಂಡ್ ರನ್ ಘಟನೆ ಸಮೀಪದ ಸಿಸಿಟಿವಿ ಕ್ಯಾಮೆರಾದಲ್ಲಿ ಸೆರೆಯಾಗಿದ್ದು, ಅದರ ಆಧಾರದ ಮೇಲೆ ಪೊಲೀಸರು ತನಿಖೆ ಆರಂಭಿಸಿದ್ದಾರೆ. ದೃಶ್ಯಾವಳಿಗಳ ಪರಿಶೀಲನೆ ನಡೆಸುತ್ತಿರುವ ಪೊಲೀಸರು ಪರಾರಿಯಾದ ಕಾರು ಮತ್ತು ಚಾಲಕನ ಪತ್ತೆಗೆ ಶೋಧ ಕಾರ್ಯವನ್ನು ತೀವ್ರಗೊಳಿಸಿದ್ದಾರೆ.

ಘಟನೆ ಕುರಿತು ಕೆಆರ್ ಪುರಂ ಸಂಚಾರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದ್ದು, ಮೃತನ ಕುಟುಂಬಕ್ಕೆ ಮಾಹಿತಿ ನೀಡಲಾಗಿದೆ. ಅಪಘಾತ ಎಸಗಿ ಎಸ್ಕೇಪ್ ಆಗಿರುವ ಚಾಲಕನನ್ನು ಶೀಘ್ರ ಬಂಧಿಸಿ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು ಎಂಬ ಆಗ್ರಹಗಳು ಸಾರ್ವಜನಿಕ ವಲಯದಲ್ಲಿ ಕೇಳಿಬರುತ್ತಿವೆ.



# ಟಾಟಾ ಏಸ್ ಡಿಕ್ಕಿ: ಮನೆಗೆ ಮರಳುತ್ತಿದ್ದ ತಾಯಿ-ಮಗ ದಾರುಣ ಸಾವು



**ನೆಲಮಂಗಲ:** ಡಿ ಮಾರ್ಟ್‌ಗೆ ತೆರಳಿ ದಿನಸಿ ಸಾಮಗ್ರಿಗಳನ್ನು ಖರೀದಿಸಿ ಮನೆಗೆ ವಾಪಸ್ ಆಗುತ್ತಿದ್ದ ತಾಯಿ ಮತ್ತು ಮಗನಿಗೆ ಟಾಟಾ ಏಸ್ ವಾಹನ ಡಿಕ್ಕಿ ಹೊಡೆದು ಇಬ್ಬರೂ ಸ್ಥಳದಲ್ಲೇ ಸಾವನ್ನಪ್ಪಿರುವ ದುರ್ಘಟನೆ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನೆಲಮಂಗಲ ತಾಲ್ಲೂಕಿನ ಗುಂಡೇನಹಳ್ಳಿ ಗೇಟ್ ಬಳಿ ಸಂಭವಿಸಿದೆ. ಈ ಹೃದಯವಿದ್ರಾವಕ ಅಪಘಾತವು ತ್ಯಾಮಗೊಂಡ್ಲು ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ.

ಮೃತರನ್ನು ಶೈಲಜಾ (45) ಮತ್ತು ಅವರ ಪುತ್ರ ಪ್ರಜ್ವಲ್ (26) ಎಂದು ಗುರುತಿಸಲಾಗಿದೆ. ತಾಯಿ-ಮಗ ಇಬ್ಬರೂ ಒಂದೇ ಬೈಕ್‌ನಲ್ಲಿ ಡಿ ಮಾರ್ಟ್‌ಗೆ ಹೋಗಿ ಅಗತ್ಯ ದಿನಸಿ ಸಾಮಗ್ರಿಗಳನ್ನು ಖರೀದಿಸಿ ಮನೆಗೆ ಮರಳುತ್ತಿದ್ದರು ಎಂದು ತಿಳಿದುಬಂದಿದೆ. ದಿನನಿತ್ಯದ ಸಾಮಾನ್ಯ ಕೆಲಸಕ್ಕಾಗಿ ಹೊರಟಿದ್ದ ಈ ಪ್ರಯಾಣವೇ ಅವರ ಜೀವನದ ಕೊನೆಯ ಪ್ರಯಾಣ ವಾಗಿರುವುದು ಕುಟುಂಬ ದವರನ್ನು ಆಘಾತಕ್ಕೆ ಒಳಪಡಿಸಿದೆ.

ಘಟನೆ ಹೇಗೆ ನಡೆದಿದೆ ಎಂಬುದಾಗಿ ತಿಳಿದುಬಂದ ಮಾಹಿತಿಯ ಪ್ರಕಾರ, ನೆಲಮಂಗಲ ತಾಲ್ಲೂಕಿನ ಗುಂಡೇನಹಳ್ಳಿ ಗೇಟ್ ಬಳಿ ತಾಯಿ-ಮಗ ಸಾಗುತ್ತಿದ್ದ ಬೈಕ್‌ಗೆ ಎದುರಿನಿಂದ ಅಥವಾ ಹಿಂಬದಿಯಿಂದ ವೇಗವಾಗಿ ಬಂದ ಟಾಟಾ ಏಸ್ ವಾಹನ ಅತಿವೇಗ ಮತ್ತು ಅಜಾಗರೂಕತೆಯಿಂದ ಡಿಕ್ಕಿ ಹೊಡೆದಿದೆ. ಡಿಕ್ಕಿಯ ತೀವ್ರತೆಗೆ ಶೈಲಜಾ ಮತ್ತು ಪ್ರಜ್ವಲ್ ಇಬ್ಬರೂ ರಸ್ತೆ ಮೇಲೆ ಬಿದ್ದು ಗಂಭೀರ ಗಾಯಗೊಂಡಿದ್ದು, ಸ್ಥಳದಲ್ಲೇ ಮೃತಪಟ್ಟಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಅಪಘಾತದ ಸುದ್ದಿ ತಿಳಿದ ಕೂಡಲೇ ಸ್ಥಳಕ್ಕೆ ತ್ಯಾಮಗೊಂಡ್ಲು ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದರು. ಬಳಿಕ ಮೃತದೇಹಗಳನ್ನು ಮರಣೋತ್ತರ ಪರೀಕ್ಷೆಗಾಗಿ ಸರ್ಕಾರಿ ಆಸ್ಪತ್ರೆಗೆ ಕಳುಹಿಸಲಾಗಿದ್ದು, ಅಗತ್ಯ ಕಾನೂನು ಪ್ರಕ್ರಿಯೆಗಳ ನಂತರ ಕುಟುಂಬದವರಿಗೆ ಹಸ್ತಾಂತರಿಸಲಾಗುತ್ತದೆ. ಈ ದುರ್ಘಟನೆಯಿಂದಾಗಿ ಸ್ಥಳದಲ್ಲಿ ಕೆಲಕಾಲ ಗೊಂದಲ ಮತ್ತು ದುಃಖದ ವಾತಾವರಣ ನಿರ್ಮಾಣವಾಗಿತ್ತು.

ಘಟನೆ ಸಂಬಂಧ ತ್ಯಾಮಗೊಂಡ್ಲು ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಟಾಟಾ ಏಸ್ ವಾಹನದ ಚಾಲಕನ ವಿರುದ್ಧ ನಿರ್ಲಕ್ಷ್ಯ ಮತ್ತು ಅತಿವೇಗ ಚಾಲನೆಯ ಆರೋಪದಡಿ ತನಿಖೆ ಮುಂದುವರಿಸಲಾಗಿದೆ. ತಾಯಿ ಮತ್ತು ಮಗನ ಅಕಾಲಿಕ ಸಾವಿನಿಂದ ಕುಟುಂಬದಲ್ಲಿ ಆಕ್ರಂದನ ಮುಗಿಲು ಮುಟ್ಟಿದ್ದು, ಇಡೀ ಪ್ರದೇಶವೇ ಶೋಕದಲ್ಲಿ ಮುಳುಗಿದೆ.

# ಭ್ರೂಣ ಹತ್ಯೆ ಮಾಹಿತಿ ನೀಡಿದವರಿಗೆ 1 ಲಕ್ಷ ರೂ. ಬಹುಮಾನ

**ಬೆಂಗಳೂರು:** ರಾಜ್ಯದಲ್ಲಿ ಹೆಣ್ಣು ಭ್ರೂಣ ಹತ್ಯೆ ಎಂಬ ಅಮಾನವೀಯ ಪದ್ಧತಿಗೆ ಸಂಪೂರ್ಣ ಅಂತ್ಯ ಹಾಡುವ ನಿಟ್ಟಿನಲ್ಲಿ ಸರ್ಕಾರ ಮಹತ್ವದ ಮತ್ತು ದಿಟ್ಟ ನಿರ್ಧಾರ ಕೈಗೊಂಡಿದೆ. ಭ್ರೂಣ ಹತ್ಯೆ ಕುರಿತು ಮಾಹಿತಿ ನೀಡುವ ಸಾರ್ವಜನಿಕರಿಗೆ ನೀಡಲಾಗುತ್ತಿದ್ದ 50 ಸಾವಿರ ರೂ. ಬಹುಮಾನ ಮೊತ್ತವನ್ನು ಇದೀಗ 1 ಲಕ್ಷ ರೂ.ಗೆ ಹೆಚ್ಚಿಸಲಾಗಿದೆ. ಸಾಬೀತುಪಡಿಸಿದೆ.

ರಾಷ್ಟ್ರೀಯ ಹೆಣ್ಣುಮಕ್ಕಳ ದಿನಾಚರಣೆ ಅಂಗವಾಗಿ ಆರೋಗ್ಯ ಸೌಧದಲ್ಲಿ ಆಯೋಜಿಸಿದ್ದ ವಿಶೇಷ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್, ಹೆಣ್ಣು ಭ್ರೂಣ ಹತ್ಯೆ ವಿರುದ್ಧ ಕಠಿಣ ಕಾನೂನು ಕ್ರಮಗಳನ್ನು ಜಾರಿಗೆ ತರಲಾಗಿದೆ ಎಂದು ಸ್ಪಷ್ಟಪಡಿಸಿದರು. ಹೆಣ್ಣು ಮಗು ತನ್ನ ಕುಟುಂಬ ಅಥವಾ ಸಮಾಜಕ್ಕೆ ಹೊರೆಯಲ್ಲ, ಅವಳು ಶಕ್ತಿ, ಚೈತನ್ಯ ಮತ್ತು ಸಂಸ್ಕಾರದ ಮೂಲ. ಮಹಿಳೆಯರಿಲ್ಲದೆ ಸಮಾಜದ ಪೂರ್ಣತೆ ಸಾಧ್ಯವೇ ಇಲ್ಲ ಎಂದು ಅವರು ಹೇಳಿದರು.

ರಾಜ್ಯದಲ್ಲಿ ಇಂದಿಗೂ ಕೆಲವು ಕಡೆಗಳಲ್ಲಿ ಹೆಣ್ಣು ಭ್ರೂಣ ಹತ್ಯೆ ನಡೆಯುತ್ತಿರುವುದು ಅತ್ಯಂತ ಬೇಸರದ ಸಂಗತಿ ಎಂದು ವಿಷಾದ ವ್ಯಕ್ತಪಡಿಸಿದ ಸಚಿವರು, ಈ ಕ್ರೂರ ಪದ್ಧತಿ ಕೇವಲ ಕಾನೂನು ಉಲ್ಲಂಘನೆಯಷ್ಟೇ ಅಲ್ಲ, ಮಾನವೀಯ ಮೌಲ್ಯಗಳ ಮೇಲಿನ ಭೀಕರ ದಾಳಿಯಾಗಿದೆ ಎಂದು ಅಭಿಪ್ರಾಯಪಟ್ಟರು. ಸಮಾಜದಲ್ಲಿ ಲಿಂಗ ಸಮಾನತೆಯನ್ನು ಬೆಳೆಸುವುದು ಮತ್ತು ಹೆಣ್ಣು ಮಕ್ಕಳನ್ನು ಗೌರವದಿಂದ ಕಾಣುವ ಸಂಸ್ಕೃತಿಯನ್ನು ರೂಪಿಸುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದು ಅವರು ಕರೆ ನೀಡಿದರು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಸುಮಾರು 60% ಉದ್ಯೋಗಿಗಳು ಮಹಿಳೆಯರೇ ಇರುವುದನ್ನು ಹೆಮ್ಮೆಯ ವಿಷಯವೆಂದು ಉಲ್ಲೇಖಿಸಿದ ದಿನೇಶ್ ಗುಂಡೂರಾವ್ ಅವರು, ಮಹಿಳೆಯರು ಮತ್ತು ಪುರುಷರು ಸಮಾನರು ಎಂಬ ಸಂದೇಶವನ್ನು ಮತ್ತೊಮ್ಮೆ ಪುನರುಚ್ಚರಿಸಿದರು. ಆಡಳಿತ, ಆರೋಗ್ಯ, ಶಿಕ್ಷಣ ಸೇರಿದಂತೆ ಪ್ರತಿಯೊಂದು ಕ್ಷೇತ್ರದಲ್ಲೂ ಮಹಿಳೆಯರ ಪಾತ್ರ ಮಹತ್ವದ್ದಾಗಿದೆ. ಹೀಗಿರುವಾಗ, ಹೆಣ್ಣು ಭ್ರೂಣ ಹತ್ಯೆ ಎಂಬ ಅಮಾನವೀಯ ಪದ್ಧತಿ ಸಮಾಜದಲ್ಲಿ ಅಸ್ತಿತ್ವದಲ್ಲಿರುವುದು ಅತ್ಯಂತ ಕಳವಳಕಾರಿ ಎಂದರು. ಈ ಅಮಾನವೀಯ ಪದ್ಧತಿಯನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡುವ ಉದ್ದೇಶದಿಂದ ಸರ್ಕಾರ ಕಠಿಣ ಕ್ರಮಗಳನ್ನು ಕೈಗೊಂಡಿದ್ದು, ವಿಶ್ವಾಸಾರ್ಹ ಮಾಹಿತಿ ನೀಡುವವರಿಗೆ ₹1,00,000 ಬಹುಮಾನ ಘೋಷಿಸಿದೆ. ಇದುವರೆಗೆ ರಾಜ್ಯದಲ್ಲಿ ಇಬ್ಬರು ನಾಗರಿಕರು ಈ ಬಹುಮಾನವನ್ನು ಪಡೆದುಕೊಂಡಿದ್ದಾರೆ ಎಂಬ ಮಾಹಿತಿಯನ್ನು ಸಚಿವರು ಹಂಚಿಕೊಂಡರು. ಇದು ಸಾರ್ವಜನಿಕರಲ್ಲಿ ಜಾಗೃತಿ ಹೆಚ್ಚಿಸಲು ಮತ್ತು ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಲು ನೆರವಾಗಲಿದೆ ಎಂದು ಅವರು ಹೇಳಿದರು.

ಹೆಣ್ಣು ಮಕ್ಕಳಿಗೆ ಆತಂಕ ರಹಿತ, ಸುರಕ್ಷಿತ ಮತ್ತು ಗೌರವಯುತ ವಾತಾವರಣವನ್ನು ನಿರ್ಮಿಸುವುದು ಸರ್ಕಾರದಷ್ಟೇ ಅಲ್ಲ, ಸಮಾಜದ ಪ್ರತಿಯೊಬ್ಬ ನಾಗರಿಕನ ಕರ್ತವ್ಯವೂ ಆಗಿದೆ. ಮನೆಯಲ್ಲೇ ಲಿಂಗ ಭೇದಭಾವವಿಲ್ಲದ ವಾತಾವರಣ ನಿರ್ಮಾಣವಾದಾಗ ಮಾತ್ರ ಸಮಾಜದಲ್ಲಿ ನಿಜವಾದ ಬದಲಾವಣೆ ಸಾಧ್ಯ. ಈ ದಿಕ್ಕಿನಲ್ಲಿ ಪ್ರತಿಯೊಬ್ಬರೂ ಕೈಜೋಡಿಸಬೇಕು ಎಂದು ಸಚಿವರು ಮನವಿ ಮಾಡಿದರು.

# ಗ್ಯಾರಂಟಿ ಯೋಜನೆಗಳು ಇರುವುದೇ ಬಡವರನ್ನು ಮುಖ್ಯವಾಹಿನಿಗೆ ತರಲು: ಸಿಎಂ



## ಗ್ರಾಮೀಣ ಜನರಿಗೆ ಆರ್ಥಿಕ ಸ್ವಾವಲಂಬನೆ ಮತ್ತು ದುಡಿಯುವ ಹಕ್ಕನ್ನು ಕೊಟ್ಟಿದ್ದ ಮನರೇಗ ಯೋಜನೆಯನ್ನು ಹಾಳುಗೆಡವುತ್ತಿದ್ದಾರೆ:ಸಿಎಂ ಆಕ್ರೋಶ

**ಹುಬ್ಬಳ್ಳಿ:** ಕೊಳೆಗೇರಿ ಜನರೂ ಮುಖ್ಯ ಾಹಿನಿಗೆ ಬರಬೇಕು. ಇದಕ್ಕಾಗಿ ಇಷ್ಟು ಬೃಹತ್ ಪ್ರಮಾಣದಲ್ಲಿ ಮನೆ ವಿತರಣೆ ಮಾಡುತ್ತಿದ್ದೇವೆ.

ನಮ್ಮ ಗ್ಯಾರಂಟಿ ಯೋಜನೆಗಳು ಇರುವುದೇ ಬಡವರನ್ನು ಮುಖ್ಯವಾಹಿನಿಗೆ ತರಲು ಎಂದು ಸಿಎಂ ಸಿದ್ದರಾಮಯ್ಯ ಅವರು ಅಭಿಪ್ರಾಯಪಟ್ಟರು.

ವಸತಿ ಇಲಾಖೆ ಹಾಗೂ ಕರ್ನಾಟಕ ರಾಜ್ಯ ಗೃಹಮಂಡಳಿ ವತಿಯಿಂದ ಇಂದು ಹುಬ್ಬಳ್ಳಿಯಲ್ಲಿ ಆಯೋಜಿಸಿದ್ದ ಸಮಾರಂಭದಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಗೃಹ ಮಂಡಳಿ ನಿರ್ಮಿಸಿರುವ 42,345 ಮನೆಗಳು ಹಾಗೂ ಕೊಳಗೇರಿ ಅಭಿವೃದ್ಧಿ ಮಂಡಳಿಯ 46,000 ಮನೆಗಳನ್ನು ಅವರು ಅರ್ಹ ಫಲಾನುಭವಿಗಳಿಗೆ ವಿತರಿಸಿ, ಶುಭ ಹಾರೈಸಿದರು.

ಮೊದಲ ಬಾರಿ ಮುಖ್ಯಮಂತ್ರಿ ಆಗಿದ್ದಾಗ ನಮ್ಮ ಕಾಂಗ್ರೆಸ್ ಸರ್ಕಾರ 1458000 ಮನೆಗಳನ್ನು ಕಟ್ಟಿ ಇತಿಹಾಸ ನಿರ್ಮಿಸಿ ವಸತಿ ಕ್ರಾಂತಿ ಮಾಡಿದ್ದೆವು. ಎರಡನೇ ಬಾರಿ ಮುಖ್ಯಮಂತ್ರಿ ಆದ ಬಳಿಕ 2024 ರಲ್ಲಿ 36789 ಮನೆಗಳನ್ನು ಮೊದಲನೇ ಹಂತದಲ್ಲಿ ವಿತರಿಸಿದ್ದ ನಮ್ಮ ಸರ್ಕಾರ ಎರಡನೇ ಹಂತದಲ್ಲಿ 45 ಸಾವಿರ ಮನೆಗಳನ್ನು ಹಂಚುತ್ತಿದ್ದೇವೆ ಎಂದರು.

ನಾವು ಹೇಳಿದ್ದನ್ನೆಲ್ಲಾ ಮಾಡಿ ನುಡಿದಂತೆ ನಡೆದಿದ್ದೇವೆ. ಅವರು ಹೇಳಿದ್ದನ್ನು ಮಾಡದೆ ನಮ್ಮ ಬಗ್ಗೆ ಸುಳ್ಳು ಹೇಳಿಕೊಂಡು ತಿರುಗುತ್ತಿದ್ದಾರೆ.ವಿದೇಶದಿಂದ ಕಪ್ಪು ಹಣ ತಂದು ಎಲ್ಲರ ಖಾತೆಗೆ 15 ಲಕ್ಷ ಹಾಕ್ತೀವಿ ಅಂದರು. ಹಾಕಿದ್ರಾ ?

ಮಹದಾಯಿ, ಕೃಷ್ಣ ಮೇಲ್ದಂಡೆ, ಭದ್ರಾ ಮೇಲ್ದಂಡೆ ಎಲ್ಲದರಲ್ಲೂ ಬಿಜೆಪಿ ಮತ್ತು ಕೇಂದ್ರ ಸರ್ಕಾರ ಮಾತು ತಪ್ಪಿದೆ. ರಾಜ್ಯದ ಜನತೆಗೆ ವಂಚಿಸಿದೆ ಎಂದರು.

ಕೇಂದ್ರ ಸಚಿವ ಪ್ರಹ್ಲಾದ್ ಜೋಶಿಯವರು ಇದಕ್ಕೆಲ್ಲಾ ಉತ್ತರಿಸಬೇಕು ಎಂದರು.

ಒಂದು ಮನೆಗೆ 4 ರಿಂದ 5 ಲಕ್ಷ ರೂಪಾಯಿಯನ್ನು ಕೊಡೋದು ರಾಜ್ಯ ಸರ್ಕಾರ. ಕೇಂದ್ರ ಕೊಡೋದು ಒಂದು ಲಕ್ಷಕ್ಕಿಂತ ಕಡಿಮೆ. ಆದರೆ ಹೆಸರು ಮಾತ್ರ ಪ್ರಧಾನ ಮಂತ್ರಿ ಆವಾಸ್ ಯೋಜನೆ. ಹಣ ನಮ್ಮದು, ರಾಜ್ಯ ಸರ್ಕಾರದ್ದು. ಹೆಸರು ಮಾತ್ರ ಕೇಂದ್ರದ್ದು ಎಂದು ಟೀಕಿಸಿದರು.

ನಮ್ಮ ಸರ್ಕಾರ ಬಂದ ಬಳಿಕ 5500 ಕೋಟಿ ರೂಪಾಯಿ ಹಣವನ್ನು ಎರಡು ವರ್ಷದಲ್ಲಿ ನಾವು, ನಮ್ಮ ಕಾಂಗ್ರೆಸ್ ಸರ್ಕಾರ ಮನೆಗಳಿಗಾಗಿ ಖರ್ಚು ಮಾಡಿದ್ದೇವೆ.

ಇಷ್ಟೆಲ್ಲಾ ಆದರೂ ಸರ್ಕಾರದ ಬೊಕ್ಕಸ ಖಾಲಿ ಎಂದು ಬಿಜೆಪಿ ಸುಳ್ಳು ಹಂಚುತ್ತಾ ತಿರುಗುತ್ತಿದೆ. ರೈತರ ಪಂಪ್ ಸೆಟ್ ಗಳಿಗೆ 2500 ಕೋಟಿ ಸಬ್ಸಿಡಿ ಪ್ರತಿ ವರ್ಷ ಕೊಡುತ್ತಿದ್ದೇವೆ. ಇದರ ಜೊತೆಗೆ ವಿಧವಾ ವೇತನ, ವೃದ್ಧಾಪ್ಯ ವೇತನ ಸೇರಿ ಪ್ರತಿಯೊಂದಕ್ಕೂ ಹೇರಳವಾಗಿ ಹಣ ಬಿಡುಗಡೆ ಮಾಡುತ್ತಲೇ ಇದ್ದೇವೆ ಎಂದರು.

ರಾಜ್ಯಸಭೆಯ ವಿಪಕ್ಷ ನಾಯಕರಾದ ಮಲ್ಲಿಕಾರ್ಜುನ ಖರ್ಗೆ, ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ವಸತಿ ಸಚಿವರಾದ ಜಮೀರ್ ಅಹ್ಮದ್ ಖಾನ್, ಸಚಿವರುಗಳಾದ ಸತೀಶ್ ಜಾರಕಿಹೊಳಿ, ಹೆಚ್.ಸಿ.ಮಹದೇವಪ್ಪ, ಹೆಚ್.ಕೆ.ಪಾಟೀಲ್, ಕೆ.ಹೆಚ್.ಮುನಿಯಪ್ಪ, ಸಂತೋಷ್ ಲಾಡ್, ಶಾಸಕರು, ಕೊಳೆಗೇರಿ ಅಭಿವೃದ್ಧಿ ಮಂಡಳಿ ಅಧ್ಯಕ್ಷರೂ ಆದ ಪ್ರಸಾದ್ ಅಬ್ಬಯ್ಯ, ಪರಿಷತ್ ಸದಸ್ಯರಾದ ಬಿ.ಕೆ.ಹರಿಪ್ರಸಾದ್, ಸಲೀಂ ಅಹ್ಮದ್ ಸೇರಿದಂತೆ ಸ್ಥಳೀಯ ಶಾಸಕರು, ಜನಪ್ರತಿನಿಧಿಗಳು ಹಾಗೂ ಮುಖಂಡರು ಉಪಸ್ಥಿತರಿದ್ದರು.

# ಸೆಲೋಕಾರ್ಟ್ ದಿನಸಿ ಮಾರ್ಟ್‌ನ 2026ರ ನೂತನ ಕ್ಯಾಲೆಂಡರ್ ಬಿಡುಗಡೆ



**ಕೃಷ್ಣರಾಜಪೇಟೆ:** ಪಟ್ಟಣದ ಪ್ರಮುಖ ವಾಣಿಜ್ಯ ಸಂಸ್ಥೆಯಾದ ಸೆಲೋಕಾರ್ಟ್ ಹೋಲ್ ಸೇಲ್ ದಿನಸಿ ಮಾರ್ಟ್ ವತಿಯಿಂದ 2026ನೇ ಸಾಲಿನ ನೂತನ ವರ್ಷದ ಕ್ಯಾಲೆಂಡರನ್ನು ಸಮಾಜ ಸೇವಕರಾದ ಆರ್‌ಟಿಓ ಮಲ್ಲಿಕಾರ್ಜುನ್ ರವರು ಬಿಡುಗಡೆ ಮಾಡಿದರು.

ಕ್ಯಾಲೆಂಡರ್ ಬಿಡುಗಡೆ ಮಾಡಿ ಮಾತನಾಡಿದ ಸಮಾಜ ಸೇವಕ ಆರ್.ಟಿ.ಓ. ಮಲ್ಲಿಕಾರ್ಜುನ್ ರವರು ವ್ಯಾಪಾರ ಸಂಸ್ಥೆಗಳು ಗ್ರಾಹಕರೊಂದಿಗೆ ಉತ್ತಮ ಬಾಂಧವ್ಯ ಹೊಂದಲು ಇಂತಹ ಸಮಾಜಮುಖಿ ಕಾರ್ಯಕ್ರಮಗಳು ಸಹಕಾರಿ ಹೊಸ ವರ್ಷವು ಎಲ್ಲರಿಗೂ ಸುಖ-ಸಮೃದ್ಧಿ ತರಲಿ ಎಂದು ಶುಭ ಹಾರೈಸಿದರು.

ಕಾರ್ಯಕ್ರಮಕ್ಕೆ ಆಗಮಿಸಿದ ಸಮಾಜ ಸೇವಕರಾದ ಆರ್.ಟಿ.ಓ. ಮಲ್ಲಿಕಾರ್ಜುನ್ ಅವರನ್ನು ಸೆಲೋಕಾರ್ಟ್ ಹೋಲ್ ಸೇಲ್ ದಿನಸಿ ಮಾರ್ಟ್ ಸಂಸ್ಥೆ ವತಿಯಿಂದ ಆತ್ಮೀಯವಾಗಿ ಸನ್ಮಾನಿ ಗೌರವಿಸಲಾಯಿತು,

ಈ ಸಂದರ್ಭದಲ್ಲಿ ಸಮಾಜ ಸೇವಕ ಆರ್. ಟಿ.ಓ. ಮಲ್ಲಿಕಾರ್ಜುನ್, ಸೆಲೋಕಾರ್ಟ್ ದಿನಸಿ ಮಾರ್ಟ್‌ನ ಮಾಲೀಕರಾದ ಸುರೇಶ್, ಕಾವ್ಯ, ಕೋಳಿ ಮಂಜೆಗೌಡ, ಗೌಡ ಜಯಕುಮಾರ್, ಡಾಬ ಕುಮಾರ್, ಪತ್ರಕರ್ತರಾದ ಕೆ. ಆರ್. ನೀಲಕಂಠ, ಗಂಜಿಗೆರೆ ಮಹೇಶ್, ಜಿ.ಪಿ. ರಾಜು, ಸೈಯಧ್ ಖಲೀಲ್, ಲೋಕೇಶ್.ವಿ, ಸಾಯಿಕುಮಾರ್. ಎನ್. ಕೆ, ಸೇರಿದಂತೆ ಸಂಸ್ಥೆಯ ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು,

# ಕಟೌಟ್ ಕುಸಿದು ಮೂವರಿಗೆ ಗಂಭೀರ ಗಾಯ



**ಹುಬ್ಬಳ್ಳಿ:** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಭಾಗವಹಿಸಬೇಕಿದ್ದ ಮಹತ್ವದ ಸರ್ಕಾರಿ ಕಾರ್ಯಕ್ರಮಕ್ಕೂ ಮುನ್ನ ಭೀಕರ ಅವಘಡ ಸಂಭವಿಸಿದೆ. ಹುಬ್ಬಳ್ಳಿಯ ಮಂಟೂರು ರಸ್ತೆಯ ಬಳಿ ನಡೆಯಲಿದ್ದ ಮನೆ ಹಸ್ತಾಂತರ ಮತ್ತು ಲೋಕಾರ್ಪಣೆ ಸಮಾರಂಭದ ವೇದಿಕೆ ಮುಂಭಾಗದಲ್ಲಿ ಹಾಕಿದ್ದ ಬೃಹತ್ ಗಾತ್ರದ ನಾಯಕರ ಕಟೌಟ್‌ಗಳು ಇದ್ದಕ್ಕಿದ್ದಂತೆ ಕುಸಿದು ಬಿದ್ದು, ಮೂವರು ಗಾಯಗೊಂಡಿರುವ ಘಟನೆ ಬೆಳಕಿಗೆ ಬಂದಿದೆ. ಗಾಯಗೊಂಡವರ ಪೈಕಿ ಒಬ್ಬರ ಸ್ಥಿತಿ ಗಂಭೀರವಾಗಿದ್ದು, ಅವರನ್ನು ತಕ್ಷಣ ಕಿಮ್ಸ್ ಆಸ್ಪತ್ರೆಗೆ ದಾಖಲಿಸಲಾಗಿದೆ.

ಪ್ರಧಾನಮಂತ್ರಿ ಆವಾಸ್ ಯೋಜನೆಯಡಿ ರಾಜ್ಯದ ವಿವಿಧ ಭಾಗಗಳಲ್ಲಿ ನಿರ್ಮಾಣಗೊಂಡ ಮನೆಗಳ ಲೋಕಾರ್ಪಣೆ ಹಾಗೂ ಹಸ್ತಾಂತರ ಕಾರ್ಯಕ್ರಮವನ್ನು ಇವತ್ತು ಹುಬ್ಬಳ್ಳಿಯಲ್ಲಿ ಆಯೋಜಿಸಲಾಗಿತ್ತು. ಈ ಹಿನ್ನೆಲೆಯಲ್ಲಿ ವೇದಿಕೆ ನಿರ್ಮಾಣ, ಅಲಂಕಾರ, ಕಟೌಟ್‌ಗಳ ಅಳವಡಿಕೆ ಸೇರಿದಂತೆ ಭಾರಿ ಸಿದ್ಧತೆ ನಡೆಯುತ್ತಿತ್ತು. ಕಾರ್ಯಕ್ರಮ ಆರಂಭಕ್ಕೂ ಮುನ್ನವೇ, ವೇದಿಕೆ ಮುಂಭಾಗದಲ್ಲಿ ಹಾಕಿದ್ದ ದೊಡ್ಡ ಗಾತ್ರದ ಕಟೌಟ್‌ಗಳು ಏಕಾಏಕಿ ಕುಸಿದು ಬಿದ್ದವು. ಈ ವೇಳೆ ಕಟೌಟ್‌ಗಳ ಬಳಿ ನಿಂತಿದ್ದ ಮೂವರು ವ್ಯಕ್ತಿಗಳ ಮೇಲೆ ಬಿದ್ದ ಪರಿಣಾಮ ಗಂಭೀರ ಗಾಯಗಳಾಗಿವೆ.

ಗಾಯಗೊಂಡವರಲ್ಲಿ ಮಂಜುನಾಥ್ ಎಂಬವರು ಗಂಭೀರವಾಗಿ ಗಾಯಗೊಂಡಿದ್ದು, ಅವರನ್ನು ತಕ್ಷಣ ಹುಬ್ಬಳ್ಳಿಯ ಕಿಮ್ಸ್ ಆಸ್ಪತ್ರೆಗೆ ದಾಖಲಿಸಲಾಗಿದೆ. ಉಳಿದ ಇಬ್ಬರು ಗಾಯಾಳುಗಳಿಗೆ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಘಟನೆಯ ಸುದ್ದಿ ತಿಳಿದ ತಕ್ಷಣ ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ಆಯುಕ್ತ ಶಶಿಕುಮಾರ್ ಹಾಗೂ ಜಿಲ್ಲಾ ಆರೋಗ್ಯಾಧಿಕಾರಿ (DHO) ಹೊನಕೇರಿ ಅವರು ಆಸ್ಪತ್ರೆಗೆ ಭೇಟಿ ನೀಡಿ ಗಾಯಾಳುಗಳ ಆರೋಗ್ಯ ವಿಚಾರಿಸಿದರು. ವೈದ್ಯರಿಂದ ಮಾಹಿತಿ ಪಡೆದು ಅಗತ್ಯ ಚಿಕಿತ್ಸಾ ವ್ಯವಸ್ಥೆ ಕಲ್ಪಿಸುವಂತೆ ಸೂಚಿಸಿದರು.

ಈ ಅವಘಡದಿಂದಾಗಿ ಕೆಲಕಾಲ ಕಾರ್ಯಕ್ರಮದ ಸಿದ್ಧತೆಗಳಲ್ಲಿ ಆತಂಕದ ವಾತಾವರಣ ನಿರ್ಮಾಣವಾಯಿತು. ಸ್ಥಳದಲ್ಲಿದ್ದ ಕಾರ್ಯಕರ್ತರು, ಅಧಿಕಾರಿಗಳು ಹಾಗೂ ಸಾರ್ವಜನಿಕರು ಗಾಬರಿಗೊಂಡರು. ಕೂಡಲೇ ಪೊಲೀಸರು ಮತ್ತು ಅಗ್ನಿಶಾಮಕ ಸಿಬ್ಬಂದಿ ಸ್ಥಳಕ್ಕೆ ಧಾವಿಸಿ, ಸುರಕ್ಷತಾ ಕ್ರಮಗಳನ್ನು ಕೈಗೊಂಡರು. ಕುಸಿದು ಬಿದ್ದ ಕಟೌಟ್‌ಗಳನ್ನು ತೆರವುಗೊಳಿಸಲಾಯಿತು.

ಇವತ್ತು ನಡೆಯಲಿರುವ ಕಾರ್ಯಕ್ರಮದಲ್ಲಿ ಪ್ರಧಾನಮಂತ್ರಿ ಆವಾಸ್ ಯೋಜನೆಯಡಿಯಲ್ಲಿ ನಿರ್ಮಾಣಗೊಂಡ 1,80,253 ಮನೆಗಳ ಪೈಕಿ ಎರಡನೇ ಹಂತದಲ್ಲಿ ಪೂರ್ಣಗೊಂಡ 42,345 ಮನೆಗಳ ಲೋಕಾರ್ಪಣೆ ಮತ್ತು ಹಸ್ತಾಂತರ ನಡೆಯಲಿದೆ. ಇದಲ್ಲದೆ, ಕೊಳಗೇರಿ ಪ್ರದೇಶಗಳ ಸುಧಾರಣೆ ಯೋಜನೆಯಡಿ ನಿರ್ಮಾಣಗೊಂಡ ವಸತಿ ಗೃಹಗಳನ್ನೂ ಫಲಾನುಭವಿಗಳಿಗೆ ಹಸ್ತಾಂತರಿಸಲಾಗುತ್ತದೆ. ರಾಜ್ಯಾದ್ಯಂತ ಗುರುತಿಸಲಾದ 3025 ಕೊಳಗೇರಿ ಪ್ರದೇಶಗಳಲ್ಲಿ 2866 ಪ್ರದೇಶಗಳನ್ನು ಅಧಿಕೃತವಾಗಿ ಕೊಳಗೇರಿ ಪ್ರದೇಶಗಳೆಂದು ಘೋಷಿಸಿ, ಮೂಲಭೂತ ಸೌಲಭ್ಯಗಳೊಂದಿಗೆ ಮನೆಗಳ ನಿರ್ಮಾಣ ಕಾರ್ಯ ಕೈಗೊಳ್ಳಲಾಗಿದೆ.

# ಪಿಯುಸಿ ವಿದ್ಯಾರ್ಥಿನಿಗೆ ಲೈಂಗಿಕ ಕಿರುಕುಳ ನೀಡಿದ ಪೊಲೀಸಪ್ಪ ಅರೆಸ್ಟ್

**ಬೆಂಗಳೂರು:** ಪೊಲೀಸ್ ಕಾನ್ಸ್‌ಟೇಬಲ್ ಒಬ್ಬರು ಕಾಲೇಜು ವಿದ್ಯಾರ್ಥಿನಿಗೆ ಲೈಂಗಿಕ ಕಿರುಕುಳ ನೀಡಿದ ಆರೋಪ ಬೆಂಗಳೂರು ನಗರದಲ್ಲಿ ಗಂಭೀರ ಚರ್ಚೆಗೆ ಕಾರಣವಾಗಿದೆ. ನಗರದ ಫ್ರೀಡಂ ಪಾರ್ಕ್‌ನಲ್ಲಿ ಕರ್ತವ್ಯಕ್ಕೆ ನಿಯೋಜನೆಯಾಗಿದ್ದ ಆರ್.ಟಿ. ನಗರ ಪೊಲೀಸ್ ಠಾಣೆಯ ಕಾನ್ಸ್‌ಟೇಬಲ್ ಯಮುನಾ ನಾಯಕ್ ಎಂಬಾತ, ಪ್ರಥಮ ಪಿಯುಸಿ ವ್ಯಾಸಂಗ ಮಾಡುತ್ತಿದ್ದ ವಿದ್ಯಾರ್ಥಿನಿಗೆ ಲೈಂಗಿಕ ಕಿರುಕುಳ ನೀಡಿದ್ದಾನೆ ಎಂಬ ಆರೋಪ ಕೇಳಿಬಂದಿದೆ. ಈ ಸಂಬಂಧ ವಿದ್ಯಾರ್ಥಿನಿ ನೀಡಿದ ದೂರಿನ ಆಧಾರದ ಮೇಲೆ ಉಪ್ಪಾರಪೇಟೆ ಪೊಲೀಸರು ಪೋಕ್ಸೋ ಕಾಯ್ದೆಯಡಿ ಪ್ರಕರಣ ದಾಖಲಿಸಿಕೊಂಡು ಆರೋಪಿಯನ್ನು ಬಂಧಿಸಿದ್ದಾರೆ.

ಲಭ್ಯವಿರುವ ಮಾಹಿತಿಯ ಪ್ರಕಾರ, ಫ್ರೀಡಂ ಪಾರ್ಕ್‌ನಲ್ಲಿ ಭದ್ರತಾ ಕರ್ತವ್ಯಕ್ಕೆ ನಿಯೋಜನೆಯಾಗಿದ್ದ ಯಮುನಾ ನಾಯಕ್, ಅಪ್ರಾಪ್ತ ವಯಸ್ಸಿನ ಕಾಲೇಜು ವಿದ್ಯಾರ್ಥಿನಿಯೊಂದಿಗೆ ಅಸಭ್ಯವಾಗಿ ವರ್ತಿಸಿ ಲೈಂಗಿಕ ಕಿರುಕುಳ ನೀಡಿದ್ದಾನೆ ಎನ್ನಲಾಗಿದೆ. ಈ ಘಟನೆಯಿಂದ ಬೆಚ್ಚಿಬಿದ್ದ ವಿದ್ಯಾರ್ಥಿನಿ, ಬಳಿಕ ಧೈರ್ಯವಾಗಿ ಉಪ್ಪಾರಪೇಟೆ ಪೊಲೀಸ್ ಠಾಣೆಗೆ ತೆರಳಿ ಅಧಿಕೃತ ದೂರು ದಾಖಲಿಸಿದ್ದಾಳೆ. ದೂರಿನ ಗಂಭೀರತೆಯನ್ನು ಪರಿಗಣಿಸಿದ ಪೊಲೀಸರು ತಕ್ಷಣವೇ ಪ್ರಕರಣ ದಾಖಲಿಸಿಕೊಂಡು ತನಿಖೆ ಕೈಗೊಂಡಿದ್ದಾರೆ.

ವಿದ್ಯಾರ್ಥಿನಿ ನೀಡಿದ ದೂರಿನ ಆಧಾರದಲ್ಲಿ ಉಪ್ಪಾರಪೇಟೆ ಪೊಲೀಸರು ಪೋಕ್ಸೋ ಕಾಯ್ದೆಯಡಿ ಪ್ರಕರಣ ದಾಖಲಿಸಿಕೊಂಡು, ಆರೋಪಿ ಪೊಲೀಸ್ ಪೇದೆ ಯಮುನಾ ನಾಯಕ್ ಅನ್ನು ಬಂಧಿಸಿ ಮುಂದಿನ ತನಿಖೆ ನಡೆಸುತ್ತಿದ್ದಾರೆ. ಸಾರ್ವಜನಿಕ ಸೇವೆಯಲ್ಲಿದ್ದು, ಕಾನೂನು ಕಾಪಾಡಬೇಕಾದ ಪೊಲೀಸ್ ಸಿಬ್ಬಂದಿಯೇ ಈ ರೀತಿ ಕಾನೂನು ಉಲ್ಲಂಘನೆಗೆ ಮುಂದಾಗಿರುವುದು ಸಾರ್ವಜನಿಕರಲ್ಲಿ ತೀವ್ರ ಆಕ್ರೋಶಕ್ಕೆ ಕಾರಣವಾಗಿದೆ.

ಈ ಘಟನೆಯು ಪೊಲೀಸ್ ಇಲಾಖೆಯ ಗೌರವ ಮತ್ತು ವಿಶ್ವಾಸಕ್ಕೆ ಗಂಭೀರ ಧಕ್ಕೆ ತಂದಿದೆ ಎನ್ನುವ ಅಭಿಪ್ರಾಯಗಳು ಕೇಳಿಬರುತ್ತಿವೆ. ಒಮ್ಮೆ ಕರ್ನಾಟಕ ಪೊಲೀಸ್ ಇಲಾಖೆ ತನ್ನ ದಕ್ಷತೆ, ಶಿಸ್ತು ಮತ್ತು ವೃತ್ತಿಪರತೆಗೆ ದೇಶಾದ್ಯಂತ ಹೆಸರುವಾಸಿಯಾಗಿತ್ತು. ಕಾನೂನು ಮೀರಿದವರ ವಿರುದ್ಧ ಕ್ಷಿಪ್ರ ಕ್ರಮ ಕೈಗೊಂಡು ಆರೋಪಿಗಳನ್ನು ಜೈಲು ಸೇರಿಸುವ ಮೂಲಕ ಜನರ ನಂಬಿಕೆಯನ್ನು ಗಳಿಸಿತ್ತು. ಆದರೆ ಇತ್ತೀಚಿನ ದಿನಗಳಲ್ಲಿ ಪರಿಸ್ಥಿತಿ ಬದಲಾಗುತ್ತಿರುವುದಾಗಿ ಸಾರ್ವಜನಿಕರು ಆರೋಪಿಸುತ್ತಿದ್ದಾರೆ.

ಕೊಲೆ, ಸುಲಿಗೆ, ಲೈಂಗಿಕ ದೌರ್ಜನ್ಯ, ಅತ್ಯಾಚಾರ, ಭೂ ಮಾಫಿಯಾ, ಲಂಚ ಸೇರಿದಂತೆ ಹಲವು ಅಪರಾಧ ಪ್ರಕರಣಗಳಲ್ಲಿ ಪೊಲೀಸರೇ ಆರೋಪಿಗಳಾಗಿ ಕೋರ್ಟ್ ಕಟಕಟೆಯಲ್ಲಿ ನಿಲ್ಲುವ ಸ್ಥಿತಿ ನಿರ್ಮಾಣವಾಗುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ. ಇತ್ತೀಚೆಗೆ ಬೆಂಗಳೂರಿನಲ್ಲಿ ಪೊಲೀಸರ ಅಕ್ರಮ ಚಟುವಟಿಕೆಗಳಿಗೆ ಸಂಬಂಧಿಸಿದಂತೆ ಹಲವು ಪ್ರಕರಣಗಳು ಬಹಿರಂಗವಾಗಿದ್ದು, ಈ ಸಂಬಂಧ ಅನೇಕ ಪೊಲೀಸ್ ಪೇದೆಗಳು ಹಾಗೂ ಇನ್ಸ್‌ಪೆಕ್ಟರ್‌ಗಳನ್ನು ಅಮಾನತುಗೊಳಿಸಲಾಗಿದೆ.

ಸುದ್ದಿ ಹಾಗೂ ಜಾಹೀರಾತುಗಾಳಿಗಾಗಿ ಸಂಪರ್ಕಿಸಿ 9538786812\8217606793

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.